# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 463 |
| ಸದಸ್ಯರ ಹೆಸರು | : | ಶ್ರೀ ಚಿದಾನಂದ್ ಎಂ.ಗೌಡ<br>( ಪದವೀಧರರ ಕ್ಷೇತ್ರ ) |
| ಉತ್ತರಿಸಬೇಕಾದ ದಿನಾಂಕ | : | 10.07.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಒದಗಿಸಿರುವ ಸೌಲಭ್ಯಗಳು ಯಾವುವು;(ವಿವರ ನೀಡುವುದು) | **ಉಚಿತ ಸಮವಸ್ತ್ರ:**<br>ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ 1 ರಿಂದ 10 ನೇ ತರಗತಿಯ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಸಮವಸ್ತ್ರ ವಿತರಿಸಲಾಗುತ್ತಿದೆ. ಪ್ರಸ್ತುತ 2023-24 ನೇ ಸಾಲಿಗೆ ಶೇ. 83 ರಷ್ಟು ಮಕ್ಕಳಿಗೆ ಸಮವಸ್ತ್ರಗಳು ತಲುಪಿದ್ದು ಬಾಕಿ ಶೇ.17 ರಷ್ಟು ಮಕ್ಕಳಿಗೆ ಜುಲೈ ಅಂತ್ಯದೊಳಗೆ ಸರಬರಾಜು ಪೂರ್ಣಗೊಳ್ಳಲಿದೆ.<br>**ಪಠ್ಯಪುಸ್ತಕ :**<br>ವಿದ್ಯಾವಿಕಾಸ ಯೋಜನೆಯಡಿ 2023-24ನೇ ಸಾಲಿನ 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಮುದ್ರಿಸಿ ಪಠ್ಯ ಪುಸ್ತಕಗಳನ್ನು ಶಾಲೆಗಳಿಗೆ ಸರಬರಾಜು ಮಾಡಲಾಗಿದೆ.<br>**ಶೂ ಮತ್ತು ಸಾಕ್ಸ್:**<br>ರಾಜ್ಯದಲ್ಲಿ 01 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ ಶಾಲಾ ಮಕ್ಕಳಿಗೆ ವಿದ್ಯಾವಿಕಾಸ ಯೋಜನೆಯಡಿ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ಉಚಿತವಾಗಿ ನೀಡಲಾಗುತ್ತಿದೆ. ಎಸ್.ಎ.ಟಿ.ಎಸ್ ಮಕ್ಕಳ ಸಂಖ್ಯೆಗನುಗುಣವಾಗಿ ಶೂ ಮತ್ತು ಸಾಕ್ಸ್ ಖರೀದಿ ಮಾಡುವಂತೆ ತಿಳಿಸಿ ಎಸ್.ಡಿ.ಎಂ.ಸಿ ಗಳಿಗೆ ಒಟ್ಟು: ರೂ 125.00 ಕೋಟಿಗಳ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಲಾಗಿರುತ್ತದೆ.<br><br>**ಮಧ್ಯಾಹ್ನ ಉಪಹಾರ ಹಾಗೂ ಕ್ಷೀರ ಭಾಗ್ಯ ಯೋಜನೆ:**<br>ಸರ್ಕಾರಿ ಶಾಲೆಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೆ ಮಧ್ಯಾಹ್ನ ಬಿಸಿ ಊಟ ಹಾಗೂ ಬಿಸಿ ಹಾಲನ್ನು ನೀಡಲಾಗುತ್ತದೆ.<br>**ಪ್ರಯಾಣ ಭತ್ಯೆ:**<br>ಎಂ.ಎಚ್.ಆರ್.ಡಿ. ಅನುಮೋದಿತ ಅನುದಾನದಿಂದ 1 ಕಿ.ಮೀ ವ್ಯಾಪ್ತಿಯಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳಿಲ್ಲದ, 3 ಕಿ.ಮೀ ವ್ಯಾಪ್ತಿಯಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳಿಲ್ಲದ ಮತ್ತು 5 ಕಿ.ಮೀ ವ್ಯಾಪ್ತಿಯಲ್ಲಿ ಪ್ರೌಢ ಶಾಲೆಗಳಿಲ್ಲದ |

| | | |
|---|---|---|
| | | ವಿದ್ಯಾರ್ಥಿಗಳಿಗೆ ಶಾಲೆಗೆ ಹೋಗಿ ಬರಲು ಸಾರಿಗೆ ಭತ್ಯೆಯನ್ನು ನೀಡಲಾಗುತ್ತಿದೆ. ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ 600/– ರಂತೆ ಆರು ತಿಂಗಳಿಗೆ ಸಾರಿಗೆ ಭತ್ಯೆ ನೀಡಲಾಗುತ್ತಿದೆ.<br>**ಕಸ್ತೂರ ಬಾ ಗಾಂಧಿ ಬಾಲಕಿಯರ ವಸತಿ ಶಾಲೆ (KGBV):**<br>ಕೆಜಿಬಿವಿ ಟೈಪ್–1 & 3 ಒಟ್ಟು 74 ವಸತಿ ಶಾಲೆಗಳಲ್ಲಿ ಒದಗಿಸಿರುವ ಸೌಲಭ್ಯಗಳು:<br>(ಟೈಪ್–1 ತರಗತಿ 6 ರಿಂದ 8ನೇ 66 ವಸತಿ ಶಾಲೆಗಳು), (ಟೈಪ್–3: ತರಗತಿ 6 ರಿಂದ 12ನೇ 8 ವಸತಿ ಶಾಲೆಗಳು.)<br>• ಗುಣಮಟ್ಟದ ಪೌಷ್ಟಿಕ ಆಹಾರವನ್ನು ಒದಗಿಸಲಾಗುತ್ತಿದೆ.<br>• ಪ್ರತಿ ವಿದ್ಯಾರ್ಥಿನಿಯರಿಗೆ ಮಾಸಿಕ ರೂ.100/– ಪ್ರೋತ್ಸಾಹಧನ ನೀಡಲಾಗುತ್ತದೆ.<br>• ಪೂರಕ ಕಲಿಕಾ ಬೋಧನಾ ಮತ್ತು ಶೈಕ್ಷಣಿಕ ಸಾಮಗ್ರಿಗಳು, ನೋಟ್ ಬುಕ್, ಪೆನ್ ಬ್ಯಾಗ್ ಗಳನ್ನು ನೀಡಲಾಗುತ್ತದೆ.<br>• ವೃತ್ತಿ ಶಿಕ್ಷಣ ತರಬೇತಿಗಳಾದ ಕಂಪ್ಯೂಟರ್ ಸೌಂದರ್ಯ ವರ್ಧಕ, ಹೊಲಿಗೆ ಇತ್ಯಾದಿಗಳನ್ನು ನೀಡಲಾಗುತ್ತಿದೆ.<br>• 3 ತಿಂಗಳಿಗೊಮ್ಮೆ ವೈದ್ಯಕೀಯ ಚಿಕಿತ್ಸೆ.<br>• ಸ್ವಯಂ ರಕ್ಷಣಾ ತರಬೇತಿ.<br>• 3 ವರ್ಷಕ್ಕೆ ಒಂದು ಬಾರಿ ಹಾಸಿಗೆ ಹೊದಿಕೆ, ಬದಲಾವಣೆ.<br>ಪ್ಯಾಡ್ ವೆಂಡಿಂಗ್ ಮಿಷನ್ ಹಾಗೂ ಇನ್ಸಿನರೇಟರ್ ಸೌಲಭ್ಯವನ್ನು ಒದಗಿಸಲಾಗಿದೆ. |
| ಆ) | ಸರ್ಕಾರಿ/ಅನುದಾನಿತ ಶಾಲೆಗಳ 8, 9, ಮತ್ತು 10ನೇ ತರಗತಿಯ ಗ್ರಾಮೀಣ ವಿದ್ಯಾರ್ಥಿಗಳಿಗೆ ಬೈಸಿಕಲ್ ನೀಡುವ ಯೋಜನೆ ಸರ್ಕಾರದ ಮುಂದಿದೆಯೆ; ಹೌದಾದಲ್ಲಿ ಯಾವಾಗಿನಿಂದ ನೀಡಲಾಗುವುದು; (ಮಾಹಿತಿ ನೀಡುವುದು) | ಈ ರೀತಿಯ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ. |
| ಇ) | ಸರ್ಕಾರಿ/ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಶಾಲೆಗೆ ಬರಲು ಅನುಕೂಲವಾಗುವಂತೆ ಸ್ಕೂಲ್ ಬಸ್ ಸೌಲಭ್ಯ ಒದಗಿಸಲಾಗುತ್ತಿದೆಯೆ; ಹೌದಾದಲ್ಲಿ, ಶಾಲಾವಾರು ವಿವರ ನೀಡುವುದು; ಇಲ್ಲದಿದ್ದಲ್ಲಿ | ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಸ್ಕೂಲ್ ಬಸ್ ಸೌಲಭ್ಯ ಒದಗಿಸುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ.<br>ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಶಾಲೆಗೆ ಬರಲು ಎಂ.ಎಚ್.ಆರ್.ಡಿ. ಅನುಮೋದಿತ ಅನುದಾನದಿಂದ 1 |

| | | |
|---|---|---|
| | ಸರ್ಕಾರ ಯಾವಾಗಿನಿಂದ ಪ್ರಾರಂಭಿಸಲು ಉದ್ದೇಶಿಸಲಾಗಿದೆ; (ವಿವರ ನೀಡುವುದು) | ಕಿ.ಮೀ ವ್ಯಾಪ್ತಿಯಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳಿಲ್ಲದ, 3 ಕಿ.ಮೀ ವ್ಯಾಪ್ತಿಯಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳಿಲ್ಲದ ಮತ್ತು 5 ಕಿ.ಮೀ ವ್ಯಾಪ್ತಿಯಲ್ಲಿ ಪ್ರೌಢ ಶಾಲೆಗಳಿಲ್ಲದ ವಿದ್ಯಾರ್ಥಿಗಳಿಗೆ ಶಾಲೆಗೆ ಹೋಗಿ ಬರಲು ಸಾರಿಗೆ ಭತ್ಯೆಯನ್ನು ನೀಡಲಾಗುತ್ತಿದೆ. ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ 600/- ರಂತೆ ಆರು ತಿಂಗಳಿಗೆ ಸಾರಿಗೆ ಭತ್ಯೆ ನೀಡಲಾಗುತ್ತಿದೆ.<br>ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಶಾಲೆಗೆ ಬರಲು ಸರ್ಕಾರಿ ಬಸ್ಸುಗಳಲ್ಲಿ ಪ್ರಯಾಣಿಸಲು ಉಚಿತವಾಗಿ ಬಸ್‌ಪಾಸ್ ವಿತರಿಸಲಾಗುತ್ತಿದೆ. |
| ಈ) | ಸರ್ಕಾರಿ/ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಇತರೆ ಲೇಖನಿ ಸಾಮಾಗ್ರಿಗಳನ್ನು ಸರ್ಕಾರ ಒದಗಿಸುತ್ತಿದೆಯ;(ಸಂಪೂರ್ಣ ವಿವರ ನೀಡುವುದು) | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ, SCP/TSP ಯೋಜನೆಯಡಿ ಉಚಿತ ನೋಟ್ ಬುಕ್‌ಗಳನ್ನು 2021-22 ಹಾಗೂ 2022-23ನೇ ಸಾಲಿಗೆ ಒದಗಿಸಲಾಗಿದೆ.<br>• 2021-22ನೇ ಸಾಲಿನಲ್ಲಿ ಒಟ್ಟು 1,05,000 ವಿದ್ಯಾರ್ಥಿಗಳಿಗೆ ತಲಾ 6 ನೋಟ್ ಬುಕ್‌ಗಳಂತೆ 6,30,000 ನೋಟ್‌ಬುಕ್‌ಗಳನ್ನು MSIL ಸಂಸ್ಥೆಯ ಮೂಲಕ ವಿತರಿಸಲಾಗಿದೆ.<br>• 2022-23ನೇ ಸಾಲಿನಲ್ಲಿ 1,50,000 ವಿದ್ಯಾರ್ಥಿಗಳಿಗೆ ತಲಾ 6 ನೋಟ್ ಬುಕ್‌ಗಳಂತೆ 9,00,000 ನೋಟ್‌ಬುಕ್‌ಗಳನ್ನು MSIL ಸಂಸ್ಥೆಯ ಮೂಲಕ ವಿತರಿಸಲಾಗಿದೆ. |
| ಉ) | ಇಲ್ಲದಿದ್ದಲ್ಲಿ, ಗ್ರಾಮೀಣ ಭಾಗದ ಮಕ್ಕಳಿಗೆ ನೋಟ್ ಬುಕ್, ಪೆನ್-ಪೆನ್ಸಿಲ್ ಇತ್ಯಾದಿ ಸಾಮಗ್ರಿಗಳನ್ನು ಸರ್ಕಾರದಿಂದ ಖರೀದಿ ಮಾಡಿ ಒದಗಿಸಲಾಗುವುದೇ?(ವಿವರ ನೀಡುವುದು) | ಸರ್ಕಾರಿ ಶಾಲೆಗಳ ಗ್ರಾಮೀಣ ಭಾಗದ ಮಕ್ಕಳಿಗೆ ನೋಟ್ ಬುಕ್, ಪೆನ್-ಪೆನ್ಸಿಲ್ ಇತ್ಯಾದಿ ಸಾಮಗ್ರಿಗಳನ್ನು ಒದಗಿಸುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ. |

**ಇಪಿ: 55 ಎಂಪಿಇ 2023**

(ಎಸ್.ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**